# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 476 |
| ಮಾನ್ಯ ಸದಸ್ಯರ ಹೆಸರು | ಶ್ರೀ ಹೆಚ್. ಎಂ.ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದವರು | ಅಬಕಾರಿ ಸಚಿವರು |
| ಉತ್ತರಿಸಬೇಕಾದ ದಿನಾಂಕ | 24-09-2020 |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಾದ್ಯಂತ ಈವರೆಗೆ ನವೀಕರಿಸದೆ ಉಳಿಸಿಕೊಂಡಿರುವ ಅಬಕಾರಿ ಪರವಾನಗಿಗಳ ಸಂಖ್ಯೆ ಎಷ್ಟು; ಈ ಪರವಾನಗಿಯಲ್ಲಿ ಕಾರ್ಯಾಚರಿಸುತ್ತಿರುವ ವರ್ತಕರ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ; | 2020-21ನೇ ಸಾಲಿಗೆ 10942 ಸನ್ನದುಗಳು ನವೀಕರಣಗೊಂಡಿದ್ದು, ಇನ್ನೂ 352 ಸನ್ನದುಗಳು ನವೀಕರಣಗೊಳ್ಳಲು ಬಾಕಿ ಇರುತ್ತದೆ. ಅಬಕಾರಿ ಕಾಯ್ದೆ ಮತ್ತು ನಿಯಮಗಳಡಿ ಸನ್ನದುಗಳನ್ನು ನವೀಕರಣಗೊಳಿಸದೇ ಕಾರ್ಯನಿರ್ವಹಿಸಲು ಅವಕಾಶವಿರುವುದಿಲ್ಲ. |
| ಆ) | ರಾಜ್ಯದಲ್ಲಿ ಹೊಸದಾಗಿ ನೀಡಲಾಗುತ್ತಿರುವ ಎಂ.ಎಸ್.ಐ.ಎಲ್ ಮಳಿಗೆಗಳ ಸಂಖ್ಯೆ ಎಷ್ಟು; ಹೊಸ ಎಂ.ಎಸ್.ಐ.ಎಲ್ ಮಳಿಗೆಗಳನ್ನು ಸ್ಥಾಪಿಸಲು ಇರುವ ಮಾನದಂಡಗಳೇನು; ಎಂ.ಎಸ್.ಐ.ಎಲ್ ನಿಂದ ಸರ್ಕಾರಕ್ಕೆ ಮತ್ತು ಮಳಿಗೆ ನಡೆಸುವವರಿಗೆ ಇರುವ ಲಾಭಗಳೇನು; | ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 07 ಇಎಫ್‌ಎಲ್ 2008 ದಿನಾಂಕ:03.07.2009 ರಲ್ಲಿ 463 ಸನ್ನದುಗಳನ್ನು ಹಾಗೂ ಸರ್ಕಾರದ ಪತ್ರ ಸಂಖ್ಯೆ: ಎಫ್‌ಡಿ 15 ಇಎಫ್‌ಎಲ್ 2015 ದಿ:23.09.2016 ರಲ್ಲಿ 900 ಸನ್ನದುಗಳನ್ನು ರಾಜ್ಯದಲ್ಲಿ ಎಂ.ಎಸ್.ಐ.ಎಲ್ ವತಿಯಿಂದ ಸ್ಥಾಪಿಸಲು ಈಗಾಗಲೇ ಹಂಚಿಕೆ ಮಾಡಲಾಗಿರುತ್ತದೆ.<br><br>ರಾಜ್ಯದಲ್ಲಿ ಎಂ.ಎಸ್.ಐ.ಎಲ್ ಸನ್ನದುಗಳನ್ನು ಮಂಜೂರು ಮಾಡಲು ಸರ್ಕಾರ ಅನುಸರಿಸುವ ಮಾರ್ಗಸೂಚಿಗಳು ಕೆಳಕಂಡಂತಿವೆ:<br><br>i. ಎಂ.ಎಸ್.ಐ.ಎಲ್ ಮಳಿಗೆಗಳನ್ನು ಕರ್ನಾಟಕ ಅಬಕಾರಿ (ಭಾರತೀಯ ಮತ್ತು ವಿದೇಶಿ ಮದ್ಯಗಳ ಮಾರಾಟ) ನಿಯಮಗಳು, 1968 ರ ನಿಯಮ-3(11-ಸಿ), 8, 8(ಎ) ಹಾಗೂ ಕರ್ನಾಟಕ ಅಬಕಾರಿ (ಸನ್ನದುಗಳ ಸಾಮಾನ್ಯ ಷರತ್ತುಗಳು) ನಿಯಮಗಳು, 1967ರ ನಿಯಮ-5ರ ಪ್ರಕಾರ ನಿಬಂಧನೆಗಳನ್ನು ಪಾಲಿಸಿ ಮಂಜೂರು ಮಾಡಲು ಪೂರ್ವಾನುಮತಿ ನೀಡಲಾಗುವುದು.<br><br>ii. ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 07 ಇಎಫ್‌ಎಲ್ 2008 ದಿನಾಂಕ: 03.07.2009 ರಲ್ಲಿ ಪ್ರತಿ ತಾಲ್ಲೂಕಿಗೆ ಕನಿಷ್ಠ 2 ರಂತೆ 352 ಸನ್ನದುಗಳು, ಜಿಲ್ಲಾ ಕೇಂದ್ರಸ್ಥಾನಕ್ಕೆ 2 ರಂತೆ 58 ಸನ್ನದುಗಳು ಹಾಗೂ ಎಂಎಸ್‌ಐಎಲ್ ಸಂಸ್ಥೆ ಪ್ರಾದೇಶಿಕ ಬೇಡಿಕೆ ಅಧ್ಯಯನ ಆಧರಿಸಿ ಕೋರಿಕೆ ಸಲ್ಲಿಸುವ ಸ್ಥಳಗಳಿಗೆ 53 ಸನ್ನದುಗಳಂತೆ ಒಟ್ಟು 463 ಸನ್ನದುಗಳನ್ನು ಹಂಚಿಕೆ ಮಾಡಲಾಗಿದೆ.<br><br>iii. ಮುಂದುವರೆದು, ಸರ್ಕಾರದ ಪತ್ರ ಸಂಖ್ಯೆ: ಎಫ್‌ಡಿ 15 ಇಎಫ್‌ಎಲ್ 2015 ದಿ:23.09.2016 ರಲ್ಲಿ ಕೆಳಕಂಡ ಷರತುಗಳ |

ಮೇಲೆ ಎಂ.ಎಸ್.ಐ.ಎಲ್ ಸಂಸ್ಥೆಗೆ ಒಟ್ಟು 900 ಸನ್ನದುಗಳನ್ನು ಹೆಚ್ಚುವರಿಯಾಗಿ ಮಂಜೂರು ಮಾಡಲು ಅನುಮೋದನೆ ನೀಡಲಾಗಿದೆ.

- ಎಂ.ಎಸ್.ಐ.ಎಲ್ ಸಂಸ್ಥೆಯೇ ತನ್ನ ವಾಣಿಜ್ಯ ಕಾರ್ಯಸಾಧ್ಯತೆಗೆ ಅನುಗುಣವಾಗಿ ಸನ್ನದುಗಳ ಸ್ಥಳವನ್ನು ನಿಗಧಿಗೊಳಿಸುವುದು. ಎಂ.ಎಸ್.ಐ.ಎಲ್ ಸಂಸ್ಥೆಯ ಅಧಿಕಾರಿಗಳು ಕರ್ನಾಟಕ ಅಬಕಾರಿ ಕಾಯ್ದೆಯನ್ವಯ ಮದ್ಯದಂಗಡಿಗಳನ್ನು ತೆರೆಯುವ ನಿರ್ದಿಷ್ಟ ಸ್ಥಳಗಳನ್ನು ಗುರುತಿಸುವುದು.

- ಈ ರೀತಿ ಗುರುತಿಸುವ ಸ್ಥಳಗಳು ಸರ್ಕಾರವು ತಿಳಿಸಿರುವ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲೇ ಇರಬೇಕು ಹಾಗೂ ನಿಗದಿಪಡಿಸಿರುವ ಸಂಖ್ಯೆಯ ಮಿತಿಯಲ್ಲೇ ಇರಬೇಕು.

- ಒಂದು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಿಂದ ಮತ್ತೊಂದು ವಿಧಾನಸಭಾ ಕ್ಷೇತ ವ್ಯಾಪ್ತಿಗೆ ವರ್ಗಾವಣೆ ಆಗದಂತೆ ನೋಡಿಕೊಳ್ಳತಕ್ಕದ್ದು.

- ಎಂ.ಎಸ್.ಐ.ಎಲ್ ಸಂಸ್ಥೆಯಿಂದ ಸನ್ನದು ಸ್ಥಳಗಳನ್ನು ಗುರುತಿಸಿ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಿದ ನಂತರ ಅಂತಹ ಸನ್ನದು ಸ್ಥಳಗಳು ಕರ್ನಾಟಕ ಅಬಕಾರಿ (ಸನ್ನದುಗಳ ಸಾಮಾನ್ಯ ಷರತ್ತುಗಳು) ನಿಯಮಗಳು, 1967ರ ನಿಯಮ 5 ರನ್ವಯ ಆಕ್ಷೇಪಣಾ ರಹಿತ ಸ್ಥಳದಲ್ಲಿರುವಂತೆ ಹಾಗೂ ಇತರೆ ಸಂಬಂಧಿಸಿದ ನಿಯಮಗಳಿಗೆ ಪೂರಕವಾಗಿರುವಂತೆ ಸಂಬಂಧಪಟ್ಟ ಅಬಕಾರಿ ಉಪ ಆಯುಕ್ತರು ನೋಡಿಕೊಳ್ಳುವುದು.

iv. ಮುಂದುವರೆದು, ಸರ್ಕಾರದ ಪತ್ರ ಸಂಖ್ಯೆ: ಎಫ್‌ಡಿ 08 ಇಎಫ್‌ಎಲ್ 2020 ದಿ:08.09.2020 ರಲ್ಲಿ ಈಗಾಗಲೇ ಮಂಜೂರು ಮಾಡಿರುವ ಒಟ್ಟು 900 ಸನ್ನದುಗಳ ಪೈಕಿ ಬಾಕಿ ಉಳಿದಿರುವ 441 ಸನ್ನದುಗಳನ್ನು ಕೆಳಕಂಡ ಷರತ್ತುಗಳ ಮೇಲೆ ಪ್ರಾರಂಭಿಸಲು ಸರ್ಕಾರದ ಅನುಮೋದನೆ ನೀಡಲಾಗಿದೆ.

- ಎಂ.ಎಸ್.ಐ.ಎಲ್ ಸಂಸ್ಥೆಯೇ ತನ್ನ ವಾಣಿಜ್ಯ ಕಾರ್ಯಸಾಧ್ಯತೆಗೆ ಅನುಗುಣವಾಗಿ ಸನ್ನದುಗಳ ಸ್ಥಳವನ್ನು ನಿಗಧಿಗೊಳಿಸುವುದು. ಎಂ.ಎಸ್.ಐ.ಎಲ್ ಸಂಸ್ಥೆಯ ಅಧಿಕಾರಿಗಳು ಕರ್ನಾಟಕ ಅಬಕಾರಿ ಕಾಯ್ದೆಯನ್ವಯ ಮದ್ಯದಂಗಡಿಗಳನ್ನು ತೆರೆಯುವ ನಿರ್ದಿಷ್ಟ ಸ್ಥಳಗಳನ್ನು ಗುರುತಿಸುವುದು.

- ಸಿಎಲ್-11(ಸಿ) ಕೋಟಾದಲ್ಲಿನ ಬಾಕಿ ಇರುವ 441 ಚಿಲ್ಲರೆ ಮದ್ಯ ಮಾರಾಟ ಸನ್ನದುಗಳ ಪೈಕಿ ಯಾವುದಾದರೂ ಸನ್ನದನ್ನು ಒಂದು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಿಂದ ಮತ್ತೊಂದು ವಿಧಾನಸಭಾ ಕ್ಷೇತ್ರ ವ್ಯಾಪ್ತಿಗೆ ವರ್ಗಾವಣೆ ಮಾಡುವುದಾದಲ್ಲಿ ಅದೇ ಜಿಲ್ಲೆಯ ಬೇರೆ ಯಾವುದಾದರೂ ಅಗತ್ಯವಿರುವ ವಿಧಾನಸಭಾ ಕ್ಷೇತ್ರಕ್ಕೆ ಕರ್ನಾಟಕ ಅಬಕಾರಿ

| | | |
|---|---|---|
| | | (ಸನ್ನದುಗಳ ಸಾಮಾನ್ಯ ಷರತ್ತುಗಳು) ನಿಯಮಗಳು, 1967ರ ನಿಯಮ 5 ರನ್ವಯ ಆಕ್ಷೇಪಣಾ ರಹಿತ ಸ್ಥಳಕ್ಕೆ ದಿನಾಂಕ:31.12.2020 ರೊಳಗೆ ವರ್ಗಾವಣೆ ಮಾಡಿಕೊಳ್ಳತಕ್ಕದ್ದು.<br>• ಎಂ.ಎಸ್.ಐ.ಎಲ್ ಸಂಸ್ಥೆಯಿಂದ ಸನ್ನದು ಸ್ಥಳಗಳನ್ನು ಗುರುತಿಸಿ ಅಬಕಾರಿ ಇಲಾಖೆಗೆ ಸಲ್ಲಿಸಿದ ನಂತರ ಅಂತಹ ಸನ್ನದು ಸ್ಥಳಗಳು ಕರ್ನಾಟಕ ಅಬಕಾರಿ (ಸನ್ನದುಗಳ ಸಾಮಾನ್ಯ ಷರತ್ತುಗಳು) ನಿಯಮಗಳು, 1967ರ ನಿಯಮ 5 ರನ್ವಯ ಆಕ್ಷೇಪಣಾ ರಹಿತ ಸ್ಥಳದಲ್ಲಿರುವಂತೆ ಹಾಗೂ ಇತರೆ ಸಂಬಂಧಿಸಿದ ನಿಯಮಗಳಿಗೆ ಪೂರಕವಾಗಿರುವಂತೆ ಸಂಬಂಧಪಟ್ಟ ಅಬಕಾರಿ ಉಪ ಆಯುಕ್ತರು ನೋಡಿಕೊಳ್ಳತಕ್ಕದ್ದು.<br>ಎಂ.ಎಸ್.ಐ.ಎಲ್ ಸಂಸ್ಥೆಗೆ ಮದ್ಯ ಮಾರಾಟಕ್ಕಾಗಿ ನೀಡಲಾಗುವ ಸಿಎಲ್-11ಸಿ ಸನ್ನದಿನಿಂದ ಗ್ರಾಹಕರಿಗೆ ಗುಣಮಟ್ಟದ ಮದ್ಯವನ್ನು ಎಂ.ಆರ್.ಪಿ ದರದಲ್ಲಿಯೇ ನೀಡಲಾಗುತ್ತಿದೆ. ಮದ್ಯ ಮಾರಾಟದಿಂದ ಸಂಗ್ರಹಣೆಯಾಗುವ ಅಬಕಾರಿ ಸುಂಕ ಹಾಗೂ ಹೆಚ್ಚುವರಿ ಅಬಕಾರಿ ಸುಂಕ ನೇರವಾಗಿ ರಾಜ್ಯದ ಬೊಕ್ಕಸಕ್ಕೆ ಸಂದಾಯವಾಗುತ್ತದೆ. ಸಿಎಲ್-11ಸಿ ಸನ್ನದು ಮಳಿಗೆಯನ್ನು ಎಂ.ಎಸ್.ಐ.ಎಲ್ ಸಂಸ್ಥೆಯವರೇ ನಡೆಸುವುದರಿಂದ ನಿಯಮಗಳಂತೆ ಮದ್ಯದ ವಹಿವಾಟಿನ ಶೇ.10ರಷ್ಟು ಲಾಭವನ್ನು ಸರ್ಕಾರಿ ಸ್ವಾಮ್ಯದ ಎಂ.ಎಸ್.ಐ.ಎಲ್ ಸಂಸ್ಥೆಯೇ ಗಳಿಸುತ್ತಿದೆ. |
| ಇ) | ರಾಜ್ಯದಲ್ಲಿ ಲಾಕ್ ಡೌನ್ ಸಂದರ್ಭದಲ್ಲಿ ಅಬಕಾರಿ ಇಲಾಖೆಗೆ ಆದ ನಷ್ಟವೆಷ್ಟು; ಮದ್ಯದಂಗಡಿಗಳನ್ನು ತೆರೆದು ನಂತರ ಇಲ್ಲಿಯವರೆಗೆ ಸರ್ಕಾರದ ಬೊಕ್ಕಸಕ್ಕೆ ಬಂದ ಹಣವೆಷ್ಟು; (ಅಂಕಿಅಂಶ ಸಹಿತ ಮಾಹಿತಿ ನೀಡುವುದು) | ದಿನಾಂಕ: 23.03.2020 ರಿಂದ 03.05.2020 ರವರೆಗೆ ಲಾಕ್‌ಡೌನ್ ಸಂದರ್ಭದಲ್ಲಿ ಮದ್ಯದಂಗಡಿಗಳನ್ನು ಮುಚ್ಚಿಸಿರುವುದರಿಂದ, ಈ ಅವಧಿಯಲ್ಲಿ ಯಾವುದೇ ರಾಜಸ್ವ ಸಂಗ್ರಹಣೆ ಆಗಿರುವುದಿಲ್ಲ. ಕಳೆದ ಸಾಲಿನ ಇದೇ ಅವಧಿಯಲ್ಲಿ ರೂ.1,795.57 ಕೋಟಿಗಳಷ್ಟು ಅಬಕಾರಿ ರಾಜಸ್ವ ಸಂಗ್ರಹವಾಗಿರುತ್ತದೆ. ಆದ್ದರಿಂದ, ಲಾಕ್‌ಡೌನ್ ಅವಧಿಯಲ್ಲಿ ರೂ.1,795.57 ಕೋಟಿಗಳಷ್ಟು ಆದಾಯದ ಕೊರತೆ ಉಂಟಾಗಿರುತ್ತದೆ.<br>ದಿನಾಂಕ: 04.05.2020 ರಿಂದ ಲಾಕ್‌ಡೌನ್ ಅನ್ನು ತೆರೆವುಗೊಳಿಸಿ ಹಂತ ಹಂತವಾಗಿ ಮದ್ಯ ಮಾರಾಟ ಮಾಡಲು ಅನುಮತಿ ನೀಡಲಾಗಿದ್ದು, ದಿನಾಂಕ:04.05.2020 ರಿಂದ 31.08.2020 ರವರೆಗೆ ಮದ್ಯ ಮಾರಾಟದಿಂದ ರಾಜ್ಯ ಸರ್ಕಾರದ ಖಜಾನೆಗೆ ರೂ.7,581.80 ಕೋಟಿಗಳಷ್ಟು ಸಂಗ್ರಹವಾಗಿರುತ್ತದೆ. |
| ಈ) | ಆನ್ ಲೈನ್ ಮದ್ಯ ಮಾರಾಟದ ಪ್ರಸ್ತಾವನೆ ಈಗಲೂ ಸರ್ಕಾರದ ಮುಂದೆ ಇದೆಯೇ; ಇದ್ದಲ್ಲಿ, ಸರ್ಕಾರ ಆನ್ ಲೈನ್ ಮದ್ಯ ಮಾರಾಟ ಆರಂಭಿಸುತ್ತದೆಯೇ? | ಇಲ್ಲ. |

ಆಇ 71 ಇಎಲ್‌ಕ್ಯೂ 2020

(ಹೆಚ್ ನಾಗೇಶ್)
ಅಬಕಾರಿ ಸಚಿವರು